ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಮು.ಅ/ಯ.ವ/ಆ.ಅ/73A/2015-16.

ಮುಖ್ಯ ಅಭಿಯಂತರರುರವರ ಕಛೇರಿ
ಯಲಹಂಕ ವಲಯ ,ಬೃ.ಬೆಂ.ಮ.ಪಾ.
ಬೆಂಗಳೂರು -92 ದಿನಾಂಕ: 14.12.15

ಆಡಳಿತಾತ್ಮಕ ಅನುಮೋದನೆ

ವಿಷಯ:- Improvements to Balance roads and drains at Kuvempunagara 2nd Stage & Surrounding roads in ward no. 11 Vidyaranyapura sub division.

ಉಲ್ಲೇಖ:- 1). ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ , ಕಾಮಗಾರಿ ಸಂಕೇತ:

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು 2015-16ನೇ ಸಾಲಿನ ದರಪಟ್ಟಿಯಂತೆ "ಪಿ.1771" ಅನುದಾನದಡಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು **ರೂ, 30.00** ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:02-09-2015ರಲ್ಲಿ ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದೆ ಹಾಗೂ ಆಡಳಿತಾತ್ಮಕ ಅನುಮೋದನೆ ಪುಸ್ತಕ ಪುಟ ಸಂಖ್ಯೆ84-85ಕ್ಕ.ಸಂ73A ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಮುಖ್ಯ ಅಭಿಯಂತರರು,
ಯಲಹಂಕ ವಲಯ
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
2. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ. ರವರಿಗೆ, ಸೂಕ್ತ ಕ್ರಮಕ್ಕಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.